ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

**DTE-ADMI0ACM2/76/2021**

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆರಸ್ತೆ, ಬೆಂಗಳೂರು,
ದಿನಾಂಕ: 08-06-2021

-:: ಸುತ್ತೋಲೆ ::-

| | |
|---|---|
| ವಿಷಯ: | 2021-22ನೇ ಸಾಲಿಗೆ ರಾಜ್ಯದ ಸರ್ಕಾರಿ ಹಾಗೂ ಖಾಸಗಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ 08ನೇ ತರಗತಿಗೆ ಪ್ರವೇಶಾತಿ ನೀಡುವ ಬಗ್ಗೆ. |
| ಉಲ್ಲೇಖ: | 1. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಸುತ್ತೋಲೆ ಪತ್ರ ಸಂ. ಎಡಿಎಂ2(1)/ಶೈವನಿ-01/2021-22, ದಿ:04-06-2021.<br>2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಸುತ್ತೋಲೆ ಪತ್ರ ಸಂ. ಸಿ7(2) ಪ್ರಾಶಿಅ.ಖಾ.ಶಾಲಾ.ಮ.ದಾ & ಶುಲ್ಕ. 3/2021-22 ದಿ:04-06-2021.<br>3. ಸರ್ಕಾರದ ಆದೇಶ ಸಂ. ಆರ್.ಡಿ 158 ಟಿಎನ್ಆರ್ 2020, ದಿ:07-05-2021, 21-05-2021 & 03-06-2021. |

-00000000-

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯದ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಶಾಲೆಗಳಲ್ಲಿ 2021-22ನೇ ಸಾಲಿನ ವಾರ್ಷಿಕ ಶೈಕ್ಷಣಿಕ ಚಟುವಟಿಕೆಗಳನ್ನು ಪ್ರಾರಂಭಿಸಿ, ಶೈಕ್ಷಣಿಕ ಅವಧಿ, ರಜಾ ದಿನಗಳನ್ನು ಹಾಗೂ ವಾರ್ಷಿಕ ಕಾರ್ಯಸೂಚಿಯನ್ನು ಉಲ್ಲೇಖ(1)ರ ಸುತ್ತೋಲೆಯಲ್ಲಿ ನಿಗಧಿಪಡಿಸಿದೆ. ದಾಖಲಾತಿ ಪ್ರಕ್ರಿಯೆಯನ್ನು ಜೂನ್ 15 ರಿಂದ ಪ್ರಾರಂಭಿಸಿ ಆಗಸ್ಟ್-31ರ ಒಳಗೆ ಮುಕ್ತಾಯಗೊಳಿಸಲು ಉಲ್ಲೇಖ(2)ರಲ್ಲಿ ಸುತ್ತೋಲೆಯಲ್ಲಿ ಸೂಚಿಸಲಾಗಿರುತ್ತದೆ.

ಅದರಂತೆ, ಕೋವಿಡ್-19 ಎರಡನೆ ಅಲೆಯನ್ನು ನಿಯಂತ್ರಿಸಲು ರಾಜ್ಯ ಸರ್ಕಾರವು ಕಠಿಣ ನಿರ್ಭಂದನಗಳನ್ನು ವಿಧಿಸಲಾಗಿರುವ ಹಿನ್ನೆಲೆಯಲ್ಲಿ ಸರ್ಕಾರಿ ಹಾಗೂ ಖಾಸಗಿ ಕಿರಿಯ ತಾಂತ್ರಿಕ ಶಿಕ್ಷಣ ಶಾಲೆಗಳಲ್ಲಿ 08ನೇ ತರಗತಿ ಪ್ರವೇಶಾತಿಗೆ ಅರ್ಹ ಅಭ್ಯರ್ಥಿಗಳಿಂದ ದಾಖಲಾತಿಯ ಪ್ರಕ್ರಿಯೆಯನ್ನು ಸಾರ್ವಜನಿಕ ಶಿಕ್ಷಣ ಇಲಾಖೆಯ ಉಲ್ಲೇಖ(1) & (2)ರಲ್ಲಿನ ಸುತ್ತೋಲೆಗಳಲ್ಲಿ ನಿಗಧಿಪಡಿಸಿರುವಂತೆ **ಜೂನ್ 15 ರಿಂದ ಪ್ರಾರಂಭಿಸಿ** ಪ್ರವೇಶ ನಿಯಮಗಳು ಮತ್ತು ಪ್ರಸ್ತುತ ಜಾರಿಯಲ್ಲಿರುವ ಮೀಸಲಾತಿ ನಿಯಮಗಳ ಪ್ರಕಾರ ಪ್ರವೇಶಾತಿಯನ್ನು ನೀಡಲು ಸೂಚಿಸಿದೆ. ಪ್ರವೇಶಾತಿಗಾಗಿ ಶಾಲೆಯ ಆವರಣದಲ್ಲಿ ಮಕ್ಕಳು ಹಾಗೂ ಪೋಷಕರುಗಳು ಗುಂಪಾಗಿ ಸೇರದಂತೆ ಕೋವಿಡ್-19 ಸುರಕ್ಷತಾ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಿ ದಾಖಲಾತಿ ಮಾಡಿಕೊಳ್ಳುವುದು.

ಸರ್ಕಾರಿ ಕಿರಿಯ ತಾಂತ್ರಿಕ ಶಿಕ್ಷಣ ಶಾಲೆಗಳಲ್ಲಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಂದ ಸರ್ಕಾರವು ನಿಗಧಿ ಪಡಿಸಿರುವ ಅರ್ಜಿ ಶುಲ್ಕವನ್ನು ನಗದು ರೂಪದಲ್ಲಿ ಪಾವತಿಸಿಕೊಂಡು ಪ್ರವೇಶಾತಿಯನ್ನು ನೀಡಲು ತಿಳಿಸಲಾಗಿದೆ. ವಸೂಲಾದ ಅರ್ಜಿ ಶುಲ್ಕವನ್ನು ಆಗಿಂದಾಗ್ಗೆ ಸರ್ಕಾರಕ್ಕೆ ಜಮಾ ಮಾಡಿ ಇಲಾಖೆಗೆ ವರದಿ ಮಾಡುವುದು.

ಕಿರಿಯ ತಾಂತ್ರಿಕ ಶಿಕ್ಷಣ ಶಾಲೆಗಳ ವೈಶಿಷ್ಠಗಳು ಮತ್ತು ಅರ್ಹತೆ ಬಗ್ಗೆ ಸ್ಥಳೀಯವಾಗಿ ಹೆಚ್ಚಿನ ಪ್ರಚಾರ ಮಾಡಿ, ತಮ್ಮ ಸಂಸ್ಥೆಗಳಲ್ಲಿ ಹೆಚ್ಚಿನ ದಾಖಲಾತಿ ಆಗುವಂತೆ ಕ್ರಮವಹಿಸಿ, ಪ್ರಗತಿಯ ಕುರಿತಾದ ವರದಿಯನ್ನು ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಹಾಗೂ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಸಲ್ಲಿಸಲು ಸೂಚಿಸಿದೆ.

ಮೇಲ್ಕಂಡಂತೆ 2021-22ನೇ ಸಾಲಿನ ಶೈಕ್ಷಣಿಕ ಚಟುವಟಿಕೆಗಳನ್ನು ಸಾರ್ವಜನಿಕ ಶಿಕ್ಷಣ ಇಲಾಖೆಯ ಉಲ್ಲೇಖ(1) & (2)ರಲ್ಲಿನ ಸುತ್ತೋಲೆಗಳಂತೆ ಪ್ರಾರಂಭಿಸುವಂತೆ ಕ್ರಮತೆಗೆದುಕೊಳ್ಳುವುದು ಹಾಗೂ ಕೋವಿಡ್-19 ಹಿನ್ನೆಲೆಯಲ್ಲಿ ಕಾಲಕಾಲಕ್ಕೆ ಸರ್ಕಾರ/ಇಲಾಖೆ ಹೊರಡಿಸುವ ಮಾರ್ಗಸೂಚಿಗಳಂತೆ ಆಗಬಹುದಾದ ಬದಲಾವಣೆಗಳಿಗೆ ಈ ಆದೇಶ ಒಳಪಟ್ಟಿರುತ್ತದೆ.

| |
|---|
| ಟಿಪ್ಪಣಿಯು ಮಾನ್ಯ ಆಯುಕ್ತರಿಂದ ಅನುಮೋದಿಸಿದೆ. |

**ನಿರ್ದೇಶಕರು**
**ತಾಂತ್ರಿಕ ಶಿಕ್ಷಣ ಇಲಾಖೆ**

08/06/21

ಇವರಿಗೆ,

ರಾಜ್ಯದ ಎಲ್ಲಾ ಸರ್ಕಾರಿ/ಖಾಸಗಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರಿಗೆ– ಮುಂದಿನ ಕ್ರಮಕ್ಕಾಗಿ.

ಪ್ರತಿ ಮಾಹಿತಿಗಾಗಿ:-

1. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಮಾನ್ಯ ಆಯುಕ್ತರ ಆಪ್ತ ಶಾಖೆಗೆ.
3. ತಾಂತ್ರಿಕ ಶಿಕ್ಷಣ ಇಲಾಖೆಯ ಎಲ್ಲಾ ಅಧಿಕಾರಿಗಳಿಗೆ,
4. ಕಛೇರಿ ಪ್ರತಿ.